ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಸ್ವಾಧೀನಪಡಿಸಿಕೊಂಡಿರುವ ಭೂವಿವರಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

172 (165) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಎಷ್ಟು ಎಕರೆ ಜಮೀನನ್ನು ಯಾವ ಯಾವ ಉದ್ದೇಶಗಳಿಗಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; (ಸರ್ವೆ ನಂಬರ್ ಸಹಿತ ಸ್ವಾಧೀನ ಪಡಿಸಿಕೊಂಡ ದಿನಾಂಕ ಮತ್ತು ಆದೇಶಗಳೊಂದಿಗೆ ಹೋಬಳಿವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಭೂಸ್ವಾಧೀನ ಮಾಡಿಕೊಂಡಿರುವ ಜಮೀನನ್ನು ಯಾವ ದರಗಳಲ್ಲಿ ಯಾವ ಕೈಗಾರಿಕೆಗಳಿಗೆ ಎಷ್ಟು ವಿಸ್ತೀರ್ಣದ ನಿವೇಶನ ಹಂಚಿಕೆ ಮಾಡಲಾಗಿದೆ ಎಂಬ ವಿವರಗಳನ್ನು ಆದೇಶಗಳ ಸಹಿತ ಒದಗಿಸುವುದು;

(ಇ) ಕೆ.ಐ.ಎ.ಡಿ.ಬಿ ಒಮ್ಮೆ ಸ್ವಾಧೀನಪಡಿಸಿಕೊಂಡ ಜಮೀನನ್ನು ಎಷ್ಟು ವರ್ಷಗಳ ಒಳಗೆ ಉದ್ದೇಶಿತ ಯೋಜನೆಗೆ ಬಳಸಿಕೊಳ್ಳಬೇಕೆಂಬ ನಿಯಮವಿದೆ? (ಆದೇಶ/ಅಧಿನಿಯಮ ಸಹಿತ ಮಾಹಿತಿ ನೀಡುವುದು)